**ಕರ್ನಾಟಕ ಸರ್ಕಾರದ ನಡವಳಿಗಳು**

**ಜಲ ಸಂಪನ್ಮೂಲ ಇಲಾಖೆ**

**ವಿಷಯ:-** ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಆಣುರು ಹಾಗೂ ಸುತ್ತಮುತ್ತಲಿನ 30 ಕೆರೆಗಳನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ, 2018-19ನೇ ಸಾಲಿನ ದರಪಟ್ಟಿಯನ್ನಾಧರಿಸಿ ತಯಾರಿಸಿರುವ, ರೂ.212.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ ಆಣೂರು ಕೆ.ತುಂ/2018-19/7437 ದಿನಾಂಕ:08.03.2019.

-----***-----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಆಣುರು ಹಾಗೂ ಸುತ್ತಮುತ್ತಲಿನ 30 ಕೆರೆಗಳಿಗೆ ಮಳೆಯ ಅಭಾವದಿಂದ ನೀರು ಸಂಗ್ರಹಣೆಯಾಗದೇ ಜನ-ಜಾನುವಾರುಗಳಿಗೆ ತೊಂದರೆಯಾಗಿರುವುದರಿಂದ ಸದರಿ ಕೆರೆಗಳನ್ನು ಅವುಗಳ ಸಾಮರ್ಥ್ಯದ ಶೇ.50ರಷ್ಟು ತುಂಬಿಸಿ, ಈ ಭಾಗದ ಜನ- ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಮತ್ತು ಅಂತರ್ಜಲ ಮಟ್ಟ ವೃದ್ಧಿಸಲು ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಆಣುರು ಹಾಗೂ ಸುತ್ತಮುತ್ತಲಿನ 30 ಕೆರೆಗಳನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಯೋಜನೆಯನ್ನು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ.

ಮೇಲ್ಕಂಡ ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:19.02.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 51ನೇ ಸಭೆಯಲ್ಲಿ ಮಂಡಿಸಲಾಗಿ, ಸಮಿತಿಯು ತೀರುವಳಿ ನೀಡಿ, ಸದರಿ ವಿವರವಾದ ಯೋಜನಾ ವರದಿಗೆ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ, ಎಂದು ವ್ಯವಸ್ಥಾಪಕ ನಿರ್ದೇಶಕರು, ತಮ್ಮ ಪತ್ರದಲ್ಲಿ ತಿಳಿಸಿರುತ್ತಾರೆ.

ಮುಂದುವರೆದು, ಯೋಜನೆಯ ವಿವರವಾದ ಯೋಜನಾ ವರದಿಯನ್ನು, ದಿನಾಂಕ:07.03.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ 87ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ತಿಳಿಸಿ, ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಆಣುರು ಹಾಗೂ ಸುತ್ತಮುತ್ತಲಿನ 30 ಕೆರೆಗಳನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ 2018-19ನೇ ಸಾಲಿನ ದರಪಟ್ಟಿಯನ್ನಾಧರಿಸಿ ತಯಾರಿಸಿರುವ, ರೂ.212.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನೀರಾವರಿ ನಿಗಮ ರವರು ತಮ್ಮ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 19 ಎಂಎಂಬಿ 2019, ಬೆಂಗಳೂರು, ದಿನಾಂಕ:09.10.2019.**

ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಆಣುರು ಹಾಗೂ ಸುತ್ತಮುತ್ತಲಿನ 30 ಕೆರೆಗಳನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ, 2018-19ನೇ ಸಾಲಿನ ದರಪಟ್ಟಿಯನ್ನಾಧರಿಸಿ, ತಯಾರಿಸಲಾಗಿರುವ ರೂ.212.00 ಕೋಟಿಗಳ ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಾಗಿ ರೂ.150.00 ಕೋಟಿಗಳನ್ನು ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ.

...2

ಈ ಆದೇಶವನ್ನು ಕರ್ನಾಟಕ ಸರ್ಕಾರದ (ವ್ಯವಹಾರಗಳ ನಿರ್ವಹಣೆ) ನಿಯಮಗಳು, 1977 ರ ಭಾಗ–1 ರ ನಿಯಮ–17 ರ ಉಪ ನಿಯಮ (2)ರ ಪರಂತುಕದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

9/10/19

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ–1).
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1) ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2) ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3) ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ), ಪ್ರಕರಣ ಸಂ:ಸಿ: 570/2019 ದಿನಾಂಕ:03.10.2019 ರನ್ವಯ ಕಳುಹಿಸಿದೆ.
5) ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
7) ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
8) ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9) ~~ಶಾಖಾ~~ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.